ಕರ್ನಾಟಕ ವಿಧಾನ ಪರಿಷತ್ತು

01	**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ**	**: 539**
02	**ಸದಸ್ಯರ ಹೆಸರು**	**: ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)**
03	**ಉತ್ತರಿಸುವ ದಿನಾಂಕ**	**: 16.09.2021**
04	**ಉತ್ತರಿಸುವ ಸಚಿವರು**	**: ಮಾನ್ಯ ಗೃಹ ಸಚಿವರು**

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಅನಧಿಕೃತವಾಗಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾ ಹಾಗೂ ರೋಹಿಂಗ್ಯಾ ಮುಸ್ಲಿಮರನ್ನು ಗುರುತಿಸಲಾಗಿದೆಯೇ; ಈ ಅನಧಿಕೃತ ಅಕ್ರಮ ವಲಸಿಗರಿಗೆ ಆಧಾರ್ ಕಾರ್ಡ್ ಮತ್ತು ಇತರ ಸರ್ಕಾರಿ ಇಲಾಖೆಗಳಿಂದ ಗುರುತಿನ ಚೀಟಿ ಮಾಡಿ ಕೊಟ್ಟಿರುವ ಎಷ್ಟು ಅಧಿಕಾರಿಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗಿದೆ; ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ; (ವಿವರ ನೀಡುವುದು)	ರಾಜ್ಯದಲ್ಲಿ ಅನಧಿಕೃತವಾಗಿ ಅಕ್ರಮವಾಗಿ ನೆಲೆಸಿರುವ ವಿದೇಶೀ ಪ್ರಜೆಗಳನ್ನು ಗುರುತಿಸಲು ಕ್ರಮ ವಹಿಸಲಾಗುತ್ತಿದೆ. ಅನಧಿಕೃತ ವಲಸಿಗರಿಗೆ ಆಧಾರ್ ಕಾರ್ಡ್ ಮತ್ತು ಇತರೆ ಸರ್ಕಾರಿ ಇಲಾಖೆಗಳಿಂದ ಗುರುತಿನ ಚೀಟಿ ಮಾಡಿಕೊಟ್ಟ 01 ಪ್ರಕರಣವು ಬೆಂಗಳೂರು ನಗರದಲ್ಲಿ ದಾಖಲಾಗಿದ್ದು, ಒಬ್ಬ ವೈದ್ಯಾಧಿಕಾರಿಯ ಮೇಲೆ ಕಾನೂನು ಕ್ರಮ ಜರುಗಿಸಿ ಸೇವೆಯಿಂದ ಅಮಾನತ್ತು ಮಾಡಲಾಗಿದೆ.
ಆ)	ರಾಜ್ಯದ ಎಷ್ಟು ಮಸೀದಿ ಮತ್ತು ಮದರಸಗಳಲ್ಲಿ ಅಕ್ರಮ ಬಾಂಗ್ಲಾ ಮತ್ತು ರೋಹಿಂಗ್ಯಾ ಮುಸ್ಲಿಮರು ವಾಸವಾಗಿದ್ದಾರೆ; (ಮಾಹಿತಿ ನೀಡುವುದು)	ಯಾವುದೇ ಪ್ರಕರಣ ವರದಿಯಾಗಿರುವುದಿಲ್ಲ.
ಇ)	ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ;	ಅಕ್ರಮ ವಲಸಿಗರು ಆಶ್ರಯ ಪಡೆದಿರುವುದನ್ನು ನಿಯಂತ್ರಿಸಲು ಎಲ್ಲಾ ನಗರ ಮತ್ತು ಜಿಲ್ಲಾ ಮಟ್ಟದಲ್ಲಿ "ಸ್ಪೆಷಲ್ ಟಾಸ್ಕ್ ಫೋರ್ಸ್" ರಚಿಸಿದ್ದು, ಈ ಬಗ್ಗೆ ಅಕ್ರಮ ವಲಸಿಗರನ್ನು ಪತ್ತೆ ಹಚ್ಚಲು ಸ್ಥಳೀಯ ಪೊಲೀಸರು ಮತ್ತು ಸ್ಪೆಷಲ್ ಟಾಸ್ಕ್ ಫೋರ್ಸ್" ಸಿಬ್ಬಂದಿಯವರು ನಿರಂತರವಾಗಿ ಕಾರ್ಯಪ್ರವೃತ್ತರಾಗಿರುತ್ತಾರೆ.
ಈ)	ಅಕ್ರಮ ವಲಸಿಗರಿಗೆ ಆಶ್ರಯ ನೀಡಿದ ಎಷ್ಟು ಜನರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)	ಕರ್ನಾಟಕ ರಾಜ್ಯದಲ್ಲಿ ಅಕ್ರಮ ವಲಸಿಗರಿಗೆ ಆಶ್ರಯ ನೀಡಿದ ಆರೋಪದ ಮೇಲೆ ಬೆಂಗಳೂರು ನಗರದಲ್ಲಿ ಒಬ್ಬರು ಮತ್ತು ಕೆಜಿಎಫ್ ನಲ್ಲಿ ಒಬ್ಬರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗಿದೆ.
ಉ)	ಕಳೆದ ಎರಡು ವರ್ಷದಲ್ಲಿ ಗಂಭೀರ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವವರ ಅಕ್ರಮ ವಲಸಿಗರು ಜಾಮೀನಿನ ಮೇಲೆ ಬಿಡುಗಡೆಯಾದ ಬಳಿಕ ನ್ಯಾಯಾಲಯಕ್ಕೆ ಹಾಜರಾಗದೆ ದೇಶ ತೊರೆದಿರುವವರ ಸಂಖ್ಯೆ ಎಷ್ಟು? (ಪ್ರಕರಣವಾರು ವಿವರ ನೀಡುವುದು)	ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಗಂಭೀರ ಅಪರಾಧ ಪ್ರಕರಣಗಳಲ್ಲಿ ಭಾಗಿಯಾದ ಅಕ್ರಮ ವಲಸಿಗರು ಜಾಮೀನಿನ ಮೇಲೆ ಬಿಡುಗಡೆಯಾದ ಬಳಿಕ ನ್ಯಾಯಾಲಯಕ್ಕೆ ಹಾಜರುಪಡಿಸದೇ ದೇಶ ತೊರೆದಿರುವ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ.

ಒಇ 291 ಪಿಎಂಎಸ್ 2021

(ಆರಗ ಜ್ಞಾನೇಂದ್ರ)
ಗೃಹ ಸಚಿವರು